ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಶುದ್ಧ ಕುಡಿಯುವ ನೀರನ್ನು ಪೂರೈಸುವ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

731 (766) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾವೇರಿ ಜಿಲ್ಲೆಯ ಹಾನಗಲ್ ನಗರದ ಸಾರ್ವಜನಿಕರಿಗೆ ಪ್ರತಿನಿತ್ಯ ಕುಡಿಯಲು ಹಾಗೂ ದಿನಬಳಕೆಗೆ ಕಲುಷಿತ ನೀರು ಸರಬರಾಜು ಆಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಕಲುಷಿತ ನೀರು ಸರಬರಾಜು ಆಗುತ್ತಿರುವುದಕ್ಕೆ ಕಾರಣಗಳೇನು;

(ಆ) ಕಲುಷಿತ ನೀರು ಪೂರೈಕೆಯಿಂದ ಸಾರ್ವಜನಿಕರ ಆರೋಗ್ಯದ ಮೇಲೆ ಉಂಟಾಗಿರುವ ದುಷ್ಪರಿಣಾಮಗಳೇನು; ಹೊಣೆಗಾರರು ಯಾರು;

(ಇ) ಹಾವೇರಿ ಜಿಲ್ಲೆಯ ಹಾನಗಲ್ ನಗರದ ಜನರಿಗೆ ಶುದ್ಧ ನೀರನ್ನು ಪೂರೈಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು; ಹಾಗೂ ಇದಕ್ಕೆ ಬೇಕಾಗುವ ಕಾಲಾವಕಾಶ ಎಷ್ಟು?